**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**18.12.2025** **14.30 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ರಾಜ್ಯದಲ್ಲಿ ಮೊಟ್ಟೆಗಳ ಬಗ್ಗೆ ಯಾವುದೇ ಆತಂಕ ಬೇಡ; ವಿಧಾನಸಭೆಯಲ್ಲಿ ಆರೋಗ್ಯ ಸಚಿವರ ಸ್ಪಷ್ಟನೆ**

**೨. ರಾಜ್ಯದಲ್ಲಿ ಯಾವುದೇ ಸರ್ಕಾರಿ ಶಾಲೆಗಳನ್ನು ಮುಚ್ಚುವುದಿಲ್ಲ- ಸಚಿವ ಮಧುಬಂಗಾರಪ್ಪ**

**೩. ಕೃಷ್ಣಾ ಮೇಲ್ದಂಡೆ ಯೋಜನೆಯ ಮುಳುಗಡೆ ಸಂತ್ರಸ್ತರಿಗೆ ಶೀಘ್ರವೇ ಪುನರ್ ವಸತಿ ಕಲ್ಪಿಸಲು ಸರ್ಕಾರ ನಿರ್ಧಾರ**

**೪. ಕಳೆದ ಮೂರು ವರ್ಷಗಳಲ್ಲಿ ೮೮ ಪೊಲೀಸರು ಅಪರಾಧ ಕೃತ್ಯಗಳಲ್ಲಿ ಭಾಗಿ- ಮೇಲ್ಮನೆಯಲ್ಲಿ ಮಾಹಿತಿ ನೀಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್**

**೫. ಬೆಂಗಳೂರಿನ ರಸೆಲ್ ಮಾರುಕಟ್ಟೆಯ ಅಭಿವೃದ್ಧಿಗೆ ಟೆಂಡರ್ ಆಹ್ವಾನಿಸುವಂತೆ ಜಿಬಿಎ ಆಯುಕ್ತ ಮಹೇಶ್ವರ್ ರಾವ್ ಸೂಚನೆ**

**<><*<><>*><>**

ರಾಜ್ಯದಲ್ಲಿ ಲಭ್ಯವಿರುವ ಮೊಟ್ಟೆಗಳ ಬಗ್ಗೆ ಯಾವುದೇ ಆತಂಕ ಬೇಡ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ವಿ.ಸುನೀಲ್ ಕುಮಾರ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ೧೪೭ ಮೊಟ್ಟೆಗಳ ಮಾದರಿಗಳನ್ನು ಪರೀಕ್ಷಿಸಲಾಗಿದ್ದು, ಒಂದು ಹೊರತುಪಡಿಸಿ, ಉಳಿದೆಲ್ಲವೂ ಗುಣಮಟ್ಟದಿಂದ ಕೂಡಿದೆ ಎಂದು ಹೇಳಿದ್ದಾರೆ. ಯಾರು ಮೊಟ್ಟೆ ಬಗ್ಗೆ ಆತಂಕಪಡುವ ಅಗತ್ಯವಿಲ್ಲ ಹಾಗೂ ಶಾಲಾ ಮಕ್ಕಳಿಗೂ ಕೊಡಬಹುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಯಾವುದೇ ಸರ್ಕಾರಿ ಶಾಲೆಗಳನ್ನು ಮುಚ್ಚುವುದಿಲ್ಲ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧುಬಂಗಾರಪ್ಪ ವಿಧಾನಸಭೆಗೆ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಶರಣು ಸಲಗಾರ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಶಿಕ್ಷಕರಿಗೆ ಹೊರಗುತ್ತಿಗೆ ಮೂಲಕ ಅಗತ್ಯ ತರಬೇತಿ ನೀಡಲಾಗುವುದು. ಸರ್ಕಾರಿ ಶಾಲೆಗಳನ್ನು ಮುಚ್ಚಲಾಗುವುದು ಎಂಬ ವದಂತಿ ನಿರಾಧಾರ ಎಂದು ಸ್ಪಷ್ಟಪಡಿಸಿದ್ದಾರೆ. ಗಡಿಭಾಗದಲ್ಲಿರುವ ಕನ್ನಡ ಶಾಲೆಗಳಿಗೆ ಶಿಕ್ಷಕರು ಸೇರಿದಂತೆ ಅಗತ್ಯ ಮೂಲಸೌಕರ್ಯವನ್ನು ಆದ್ಯತೆ ಮೇಲೆ ಒದಗಿಸಲಾಗುವುದು ಎಂದು ತಿಳಿಸಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ೫ ಸಾವಿರದ ೨೬೭ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಹುದ್ದೆಗಳಿಗೆ ಹಾಗೂ ರಾಜ್ಯದ ಇತರ ಭಾಗಗಳಲ್ಲಿ ಖಾಲಿ ಇರುವ ೫ ಸಾವಿರ ಹುದ್ದೆಗಳಿಗೆ ಶೀಘ್ರವೇ ನೇಮಕ

ಮಾಡಲಾಗುವುದು ಎಂದು ಹೇಳಿದ್ದಾರೆ. ದ್ವಿಭಾಷಾ ಮಾಧ್ಯಮ ಬೋಧನೆಗೆ ಶಿಕ್ಷಕರನ್ನು ನಿಯಮಾನುಸಾರ ನೇಮಕ ಮಾಡಲು ಆದ್ಯತೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಪ್ರಸಕ್ತ ವರ್ಷ ರಾಜ್ಯದಲ್ಲಿ ೧೦೦ ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ವಿಧಾನಸಭೆಗೆ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ದೊಡ್ಡನಗೌಡ ಹನುಮಗೌಡ ಪಾಟೀಲ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ೨-೩ ವರ್ಷದಲ್ಲಿ ೪೦೦ ವಿದ್ಯುತ್ ಉಪಠಾಣೆಗಳನ್ನು ಸ್ಥಾಪಿಸುವ ಗುರಿಯಿದ್ದು, ಜಮೀನು ಇರುವ ಕಡೆಗಳಲ್ಲಿ ಉಪಠಾಣೆಗಳನ್ನು ಮಂಜೂರು ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ನಿತ್ಯ ಕೃಷಿ ಪಂಪ್‌ಸೆಟ್‌ಗಳಿಗೆ ೭ ಗಂಟೆ ತ್ರೀ ಫೇಸ್ ವಿದ್ಯುತ್ ಒದಗಿಸಲಾಗುತ್ತಿದೆ. ಗೃಹಬಳಕೆ ಹಾಗೂ ವಾಣಿಜ್ಯ ಬಳಕೆಗೆ ದಿನದ ೨೪ ಗಂಟೆಯೂ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ರಾಜ್ಯದಲ್ಲಿ ಒಟ್ಟು ೭ ಸಾವಿರದ ೩೦೦ ಮೆಗಾವ್ಯಾಟ್‌ನಷ್ಟು ಪವನಶಕ್ತಿ ವಿದ್ಯುತ್ ಉತ್ಪಾದನೆಯಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ತುಂಗಭದ್ರಾ ಅಣೆಕಟ್ಟೆಯ ಎಲ್ಲಾ ೩೩ ಗೇಟ್‌ಗಳ ಬದಲಾವಣೆ ಕಾಮಗಾರಿಯನ್ನು ತುಂಗಭದ್ರಾ ಮಂಡಳಿಯಿಂದ ಕೈಗೆತ್ತಿಕೊಳ್ಳಲಾಗಿದೆ. ರಾಜ್ಯ ಸರ್ಕಾರ ಮುಂಗಡವಾಗಿ ೧೦ ಕೋಟಿ ರೂಪಾಯಿ ಅನುದಾನ ನೀಡಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿಧಾನ ಪರಿಷತ್ತಿನಲ್ಲಿ ಇಂದು ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಬಸನಗೌಡ ಬಾದರ್ಲಿ ಪ್ರಶ್ನೆಗೆ ಉತ್ತರಿಸಿದ ಉಪಮುಖ್ಯಮಂತ್ರಿ, ಈ ತಿಂಗಳ ಅಂತ್ಯದಲ್ಲಿ ಜಲಾಶಯದ ನೀರಿನ ಸಂಗ್ರಹಣೆ ಮಟ್ಟ ೧ ಸಾವಿರದ ೬೧೩ ಅಡಿಗೆ ಬಂದ ನಂತರ ಗೇಟ್ ಗಳ ಅಳವಡಿಕೆ ಕಾರ್ಯ ಆರಂಭಿಸಲಾಗುವುದು. ೨೦೨೬ ರ ಜೂನ್ ತಿಂಗಳೊಳಗೆ ಈ ಕಾರ್ಯ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ, ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಮುಳುಗಡೆಗೊಂಡಿರುವ ಭೂಸಂತ್ರಸ್ತರಿಗೆ ಬಾಗಲಕೋಟೆಯಲ್ಲಿ ೨೦೦ ಎಕರೆ ಪ್ರದೇಶದಲ್ಲಿ ಪುನರ್ ವಸತಿ ಕಲ್ಪಿಸಿ, ವಾಣಿಜ್ಯ ಚಟುವಟಿಕೆಗಳಿಗೆ ಅವಕಾಶ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ.

<><*<><>*><>

ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ೩ ಸಾವಿರದ ೬೦೦ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯಿಂದ ಒಪ್ಪಿಗೆ ದೊರೆತಿದೆ. ನೇಮಕಾತಿ ಸಂಬಂಧ ಅಧಿಸೂಚನೆ ಹೊರಡಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಧಾನಪರಿಷತ್‌ನಲ್ಲಿ ತಿಳಿಸಿದ್ದಾರೆ. ಇದೇ ವೇಳೆ, ಶರವಣ ಅವರ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಒಟ್ಟು ೮೮ ಪೊಲೀಸರು ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿದ್ದಾರೆ ಎಂದು ಅಂಕಿ-ಅಂಶ ಸಮೇತ ಮಾಹಿತಿ ನೀಡಿದ್ದಾರೆ.

<><*<><>*><>

ಶಿವಾಜಿನಗರದ ರಸೆಲ್ ಮಾರುಕಟ್ಟೆಯ ಪುನರ್ ಅಭಿವೃದ್ಧಿಗೆ ಕೂಡಲೇ ಟೆಂಡರ್ ಆಹ್ವಾನಿಸುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನ ಕೇಂದ್ರ ನಗರ ಪಾಲಿಕೆಯ ಶಿವಾಜಿನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ವಿಸ್ತೃತ ಯೋಜನಾ ವರದಿ ಈಗಾಗಲೇ ಪೂರ್ಣಗೊಂಡಿದ್ದು, ಅದನ್ನು ತ್ವರಿತವಾಗಿ

ಅನುಷ್ಠಾನಕ್ಕೆ ತರಲು ನಿರ್ದೇಶನ ನೀಡಿದ್ದಾರೆ. ರಸೆಲ್ ಮಾರುಕಟ್ಟೆ ಒಂದು ಪಾರಂಪರಿಕ ಕಟ್ಟಡವಾಗಿದ್ದು, ಅದಕ್ಕೆ ಆಧುನಿಕ ಸ್ಪರ್ಶ ನೀಡುವ ಮೂಲಕ ಬೆಂಗಳೂರಿಗೆ ಜೀವಂತ, ಶಾಶ್ವತ ಹಾಗೂ ಜನಸ್ನೇಹಿ ಮಾರುಕಟ್ಟೆಯಾಗಿ ರೂಪಿಸಬೇಕು ಎಂದು ತಿಳಿಸಿದ್ದಾರೆ. ಮಾರುಕಟ್ಟೆಯಲ್ಲಿರುವ ವ್ಯಾಪಾರಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಉಂಟಾಗದಂತೆ ಬೇರೆಡೆ ತಾತ್ಕಾಲಿಕ ವ್ಯವಸ್ಥೆ ಕಲ್ಪಿಸಿ, ಕಾಮಗಾರಿ ಪ್ರಾರಂಭಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದ್ದಾರೆ. ಮಾರುಕಟ್ಟೆ ಸದಾ ಸ್ವಚ್ಛವಾಗಿರುವಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ಸಮಗ್ರ ತ್ಯಾಜ್ಯ ವಿಂಗಡಣೆ ಹಾಗೂ ಕಾಂಪೋಸ್ಟಿಂಗ್ ವ್ಯವಸ್ಥೆ ಅಳವಡಿಸಲು ಸೂಚಿಸಿದ್ದಾರೆ.

<><*<><>*><>

ಸಿದ್ದರಾಮಯ್ಯ ಅವರು ನಿರ್ಗಮಿತ ಮುಖ್ಯಮಂತ್ರಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರ ಕೊನೆಯ ಅಧಿವೇಶನ ಎಂದು ಹೇಳಿದ್ದಾರೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಬಿ.ವೈ.ವಿಜಯೇಂದ್ರ ಅವರು ಮೊದಲ ವಿಧಾನಸಭೆಯಲ್ಲಿ ಮಾತನಾಡಲಿ ಎಂದು ಸವಾಲು ಹಾಕಿದ್ದಾರೆ. ಸಚಿವ ಭೈರತಿ ಸುರೇಶ್ ಪ್ರತಿಕ್ರಿಯಿಸಿ, ವಿಜಯೇಂದ್ರ ಮೊದಲು ತಮ್ಮ ಪಕ್ಷದೊಳಗಿನ ಸಮಸ್ಯೆಗಳನ್ನು ಬಗೆಹರಿಸಲಿ ಎಂದು ತಿಳಿಸಿದ್ದಾರೆ. ಮಾಜಿ ಸಚಿವ ಕೆ.ಎನ್.ರಾಜಣ್ಣ ಮಾತನಾಡಿ, ನಿರ್ಗಮಿತ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಎಂದು ತಿರುಗೇಟು ನೀಡಿದ್ದಾರೆ.

<><*<><>*><>

ಲೋಕಸಭೆಯು ಇಂದು ವಿಕಸಿತ ಭಾರತ- ಜಿ ರಾಮ್ ಜಿ ವಿಧೇಯಕ-೨೦೨೫ ಅನ್ನು ಅಂಗೀಕರಿಸಿದೆ. ಈ ವಿಧೇಯಕವು, ೨೦ ವರ್ಷ ಹಳೆಯದಾದ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯ ಬದಲಾವಣೆಯಾಗಿದೆ. ಈ ಕಾಯ್ದೆಯಡಿಯಲ್ಲಿ ಪ್ರತಿ ಹಣಕಾಸು ವರ್ಷದಲ್ಲಿ ನೂರ ಇಪ್ಪತ್ತೈದು ದಿನಗಳ ಕೂಲಿ ದೊರೆಯಲಿದೆ. ಉದ್ಯೋಗದ ಶಾಸನಬದ್ಧ ಖಾತರಿಯನ್ನು ವಯಸ್ಕ ಸದಸ್ಯರು ಕೌಶಲ್ಯರಹಿತ ದೈಹಿಕ ಕೆಲಸವನ್ನು ಕೈಗೊಳ್ಳಲು ಸ್ವಯಂಸೇವಕರಾಗಿರುವ ಪ್ರತಿ ಗ್ರಾಮೀಣ ಕುಟುಂಬಕ್ಕೆ ಒದಗಿಸಲಾಗುತ್ತಿದೆ. ಈಶಾನ್ಯ ಮತ್ತು ಹಿಮಾಲಯದ ರಾಜ್ಯಗಳನ್ನು ಹೊರತುಪಡಿಸಿ ಎಲ್ಲಾ ರಾಜ್ಯಗಳಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ನಡುವಿನ ನಿಧಿ ಹಂಚಿಕೆ ಮಾದರಿಯು ೬೦:೪೦ ಅನುಪಾತ ಆಗಿರಲಿದೆ. ವಿಧೇಯಕ ಮೇಲಿನ ಚರ್ಚೆಗೆ ಉತ್ತರಿಸಿದ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಎಂಜಿಎನ್ಆರ್ಇಜಿಎ ಯೋಜನೆಯನ್ನು ಪರಿಣಾಮಕಾರಿ ರೀತಿಯಲ್ಲಿ ಜಾರಿಗೆ ತರಲಾಗಿದೆ ಎಂದು ಹೇಳಿದರು. ಅವರು, ಈ ಯೋಜನೆಗೆ ಯುಪಿಎ ಸರ್ಕಾರ ಕೇವಲ ಎರಡು ಲಕ್ಷ ೧೩ ಸಾವಿರ ಕೋಟಿ ರೂಪಾಯಿಗಳನ್ನು ಖರ್ಚು ಮಾಡಿದ್ದರೆ, ತಮ್ಮ ಸರ್ಕಾರ ೮ ಲಕ್ಷ ೫೩ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಖರ್ಚು ಮಾಡಿದೆ ಎಂದು ತಿಳಿಸಿದ್ದಾರೆ.

<><*<><>*><>

ಭಾರತದಲ್ಲಿ ಕೃತಕ ಬುದ್ಧಿ ಮತ್ತೆ ಮತ್ತು ದತ್ತಾಂಶ ವಿಜ್ಞಾನ ವೇಗವಾಗಿ ಬೆಳೆಯುತ್ತಿದೆ ಎಂದು ಇಂಗ್ಲೆಂಡ್‌ನ ಕಾರ್ಡಿಫ್ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊಫೆಸರ್ ಅಂಗೇಶ್ ಅನುಪಮ್ ತಿಳಿಸಿದ್ದಾರೆ. ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ನಡೆದ ಉನ್ನತ ಶಿಕ್ಷಣದ ಅಂತರರಾಷ್ಟ್ರೀಯ ಜಾಗತಿಕ ಸ್ಪರ್ಧಾತ್ಮಕತೆಯ ಒಂದು ನೋಟ

ಕುರಿತ ಅಂತರರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು ದತ್ತಾಂಶ ಗೌಪ್ಯತೆ, ನಿಷ್ಪಕ್ಷಪಾತ, ಪಾರದರ್ಶಕತೆಗಳು ಇಂದು ಅತೀ ಮುಖ್ಯವಾಗಿವೆ. ತಂತ್ರಜ್ಞಾನವು ಮಾನವನ ಬಳಕೆಗೆ ಇರಬೇಕೆ ಹೊರತು ಮಾನವನನ್ನು ಬದಲಾಯಿಸಲು ಅಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೧.೩೦ <>*><>**